ಕನ್ನಡಪ್ರಭ

# ಕಪ್ಪತ್ತಗುಡ್ಡ ಪರಿಸರದಲ್ಲಿ ಗಣಿಗಾರಿಕೆ ಪ್ರಸ್ತಾವನೆ ಸಂಪೂರ್ಣ ತಿರಸ್ಕರಿಸಿ

## ಮುಖ್ಯಮಂತ್ರಿ ಸಿದ್ದುಗೆ ಸಭಾಪತಿ ಹೊರಟ್ಟಿ ಪತ್ರ



• **ಕನ್ನಡಪ್ರಭ ವಾರ್ತೆ** ಗದಗ

ಕಪ್ಪತ್ತಗುಡ್ಡದಿಂದ 10 ಕಿ.ಮೀ. ವ್ಯಾಪ್ತಿಯಲ್ಲಿ ಗಣಿಗಾರಿಕೆ ಆರಂಭಿಸಲು ಬಂದ ಪ್ರಸ್ತಾವನೆವನ್ನು ತಿರಸ್ಕರಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಭಾ ಪತಿ ಬಸವರಾಜ ಹೊರಟ್ಟಿ ಪತ್ರ ಬರೆದಿದ್ದಾರೆ.



ಉತ್ತರ ಕರ್ನಾಟಕದ ಸಹ್ಯಾದ್ರಿ ಎಂದೇ ಕರೆಸಿ ಕೊಳ್ಳುವ ಕಪ್ಪತ್ತಗುಡ್ಡ ತನ್ನ ಒಡಲಲ್ಲಿ ಸಾವಿರಾರು ಔಷಧ ಗುಣವುಳ್ಳ ಸಸ್ಯ ಸಂಪತ್ತು ಹೊಂದಿದೆ. ಇದನ್ನು ಸಂರಕ್ಷಿಸಿಕೊಂಡು ಹೋಗುವ ಹೊಣೆಗಾರಿಕೆ ನಮ್ಮೆಲ್ಲರ ಮೇಲಿದೆ ಎಂದು ಹೇಳಿದ್ದಾರೆ.

ಕಪ್ಪತ್ತಗುಡ್ಡ ಸಂರಕ್ಷಣೆಗಾಗಿ ದಶಕಗಳಿಂದ ಹೋರಾಟ ನಡೆಯುತ್ತಿದೆ. ಕಪ್ಪತ್ತಗುಡ್ಡದಲ್ಲಿ ಗಣಿಗಾರಿಕೆ ನಡೆಸದಂತೆ ಮಠಾಧೀಶರು, ಪರಿಸರ ಹೋರಾಟಗಾರರು ಒತ್ತಾಯಿಸುತ್ತಾ ಬಂದಿದ್ದಾರೆ. ಆದಾಗ್ಯೂ, ಗಣಿಗಾರಿಕೆಗಾಗಿ ಉದ್ಯಮಿಗಳು ತಮ್ಮ ಪ್ರಯತ್ನ ಬಿಟ್ಟಿಲ್ಲ. ಗಣಿಗಾರಿಕೆ ಆರಂಭಿಸಲು 28 ಪ್ರಸ್ತಾವನೆಗಳು ಸರ್ಕಾರದ ಮುಂದೆ ಬಂದಿದ್ದವು. 15 ದಿನಗಳ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ವನ್ಯಜೀವಿ ಮಂಡಳಿ ಸಭೆಯಲ್ಲಿ ತೀರ್ಮಾನ ಮುಂದೂಡಿರುವುದು ಸ್ವಲ್ಪ ಸಮಾಧಾನ ತಂದಿದೆ. ಆದರೆ ಈ ಪ್ರಸ್ತಾವನೆಯನ್ನು ಸಂಪೂರ್ಣ ತಿರ ಸ್ಕರಿಸಿ, ಈ ಭಾಗದಲ್ಲಿ ಯಾವುದೇ ಗಣಿಗಾರಿಕೆ ಹಾಗೂ ಇತರ ಉದ್ಯಮ ಆರಂಭಿಸಲು ಅನುಮತಿ ನೀಡುವುದಿಲ್ಲವೆಂದು ಆದೇಶ ಹೊರಡಿಸಬೇಕಾ ಗಿತ್ತು. ಕೇವಲ ಪ್ರಸ್ತಾವನೆ ದೂಡಿರುವುದರಿಂದ ಉತ್ತರ ಕರ್ನಾಟಕ ಜನರಿಗೆ ಹಾಗೂ ಪರಿಸರ ಸಂರಕ್ಷಣೆ ಪರ ಹೋರಾಟಗಾರರಿಗೆ ಸಂಶಯ ಮೂಡುವ ಜತೆಗೆ ಸರ್ಕಾರದ ಮೇಲೆ ನಂಬಿಕೆ ಇಲ್ಲದಂತಾಗಿದೆ ಎಂದಿದ್ದಾರೆ. ಕಪ್ಪತ್ತಗುಡ್ಡವನ್ನು ಸೂಕ್ಷ್ಮ ವಲಯ ವ್ಯಾಪ್ತಿಯೆಂದು ಸದಾ ಸರ್ಕಾರ ಹೇಳಿಕೊಂಡು ಬಂದಿದೆ. ಈ ಕುರಿತು ಆ ಪ್ರದೇಶದಲ್ಲಿ ಗಣಿಗಾರಿಕೆ ನಡೆಸದಂತೆ ಸ್ಪಷ್ಟ ಆದೇಶ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

BENGALURU Edition
Oct 27, 2024 Page No. 08
Powered by: erelego.com

# ಕಪ್ಪತ್ತಗುಡ್ಡ ಸಂರಕ್ಷಣೆ: ಸರಕಾರ ನಂಬಿಗೆ ಕಳೆದುಕೊಳ್ಳದಿರಲಿ



**ಸಮಗ್ರ ಕರ್ನಾಟಕ ಸುದ್ದಿ**

**ಗದಗ:** ಉತ್ತರ ಕರ್ನಾಟಕದ ಸಹ್ಯಾದ್ರಿ ಎಂದೇ ಕರೆಯಿಸಿಕೊಳ್ಳುವ ಕಪ್ಪತ್ತಗುಡ್ಡ ತನ್ನ ಒಡಲಲ್ಲಿ ಸಾವಿರಾರು ಔಷಧಿ ಗುಣವುಳ್ಳ ಸಸ್ಯ ಸಂಪತ್ತನ್ನು ಹೊಂದಿದ ನಾಡಿನ ಏಕೈಕ ಅಪರೂಪದ ತಾಣವಾಗಿದೆ. ಇದನ್ನು ಸಂರಕ್ಷಿಸಿಕೊಂಡು ಹೋಗುವ ದೊಡ್ಡ ಹೊಣೆಗಾರಿಕೆ, ಕಾಳಜಿ ನಮ್ಮೆಲ್ಲರ ಮೇಲಿದೆ ಎಂದು ಸಭಾಪತಿ ಬಸವರಾಜ ಹೊರಟ್ಟಿಯವರು ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಸುಧೀರ್ಘ ಪತ್ರ ಬರೆದು ಕಪ್ಪತ್ತಗುಡ್ಡ ಸಂರಕ್ಷಣೆಗಾಗಿ ದಶಕಗಳಿಂದ ಜನಪರ ಹೋರಾಟಗಾರರು, ಮಠಾಧೀಶರು ಹೋರಾಟ ಮಾಡುವ ಮೂಲಕ ಕಪ್ಪತ್ತಗುಡ್ಡದಲ್ಲಿ ಗಣಿಗಾರಿಕೆ ನಡೆಯದಂತೆ ಒತ್ತಾಯಿಸುತ್ತಾ ಬಂದಿದ್ದಾರೆ. ಆದಾಗ್ಯೂ ಗಣಿಗಾರಿಕೆಗಾಗಿ ಉದ್ಯಮಿಗಳು ತಮ್ಮ ಪ್ರಯತ್ನವನ್ನು ಬಿಟ್ಟಿಲ್ಲ. ಈ ಕುರಿತು 28 ಪ್ರಸ್ತಾವನೆಗಳು ಗಣಿಗಾರಿಕೆ ಆರಂಭಿಸಲು ಸರಕಾರದ ಮುಂದೆ ಬಂದಿದ್ದವು. ಈ ವಿಷಯಗಳ ಕುರಿತು ಕಳೆದ 15 ದಿನಗಳ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ವನ್ಯಜೀವಿ ಮಂಡಳಿ ಸಭೆಯಲ್ಲಿ ವನ್ಯಜೀವಿ ಧಾಮ ಎಂದು ಘೋಷಿತವಾಗಿರುವ ಕಪ್ಪತ್ತಗುಡ್ಡದಿಂದ 10 ಕಿ.ಮೀ ವ್ಯಾಪ್ತಿಯಲ್ಲಿ ಗಣಿಗಾರಿಕೆ ಆರಂಭಿಸಲು ಬಂದ ಪ್ರಸ್ತಾವನೆಗಳನ್ನು ಪರಿಶೀಲಿಸಲು ನಡೆದ ಸಭೆಯಲ್ಲಿ ಮುಂದೂಡಿರುವುದು ಸ್ವಾಗತಾರ್ಹ. ಹಾಗೂ ಸ್ವಲ್ಪ ಸಮಾಧಾನ ತಂದಿದೆ. ಆದರೆ ಸಂಪೂರ್ಣ ಈ ಪ್ರಸ್ತಾವನೆಗಳನ್ನು ತಿರಸ್ಕರಿಸಿ ಈ ಭಾಗದಲ್ಲಿ ಯಾವುದೇ ಗಣಿಗಾರಿಕೆಯನ್ನು ಹಾಗೂ ಇತರೆ ಉದ್ಯಮಗಳನ್ನು ಆರಂಭಿಸಲು ಅನುಮತಿ ನೀಡುವುದಿಲ್ಲವೆಂದು ಆದೇಶ ಹೊರಡಿಸಬೇಕಾಗಿತ್ತು. ಕೇವಲ ಪ್ರಸ್ತಾವನೆಗಳನ್ನು ಮುಂದೂಡಿರುವುದರಿಂದ ಉತ್ತರ ಕರ್ನಾಟಕ ಜನರಿಗೆ ಹಾಗೂ ಪರಿಸರ ಸಂರಕ್ಷಣೆಯ ಪರ ಹೋರಾಟಗಾರರಿಗೆ ಸಂಶಯ ಮೂಡುವುದರ ಜೊತೆಗೆ ಸರಕಾರದ ಮೇಲೆ ನಂಬಿಕೆ ಇಲ್ಲದಂತಹ ವಾತಾವರಣ ಮೂಡಿದ್ದು ವಿಷಾಧನೀಯ. ಈ ಆಪಾದನೆಯಿಂದ ಮಾನ್ಯ ಮುಖ್ಯ ಮಂತ್ರಿಗಳು ಮುಕ್ತರಾಗಿ ಸಂಪೂರ್ಣ ಪ್ರಸ್ತಾವನೆಗಳನ್ನು ರದ್ದುಗೊಳಿಸಿ ಕಪ್ಪತ್ತಗುಡ್ಡ ಸಂರಕ್ಷಣೆಗೆ ಸ್ಪಷ್ಟ ಆದೇಶ ನೀಡುವ ಮೂಲಕ ನಾಡಿನ ಏಕೈಕ ಸಸ್ಯ ಸಂಪತ್ತನ್ನು ಹೊಂದಿದ ಕಪ್ಪತ್ತಗುಡ್ಡ ಉಳಿಸುವಲ್ಲಿ ದಿಟ್ಟ ಹೆಜ್ಜೆಯನ್ನು ಇಡುವ ಮೂಲಕ ಮಾನ್ಯ ಮುಖ್ಯಮಂತ್ರಿಗಳು ತಮ್ಮ ಹೆಗ್ಗುರುತುಗಳನ್ನು ಮೂಡಿಸಲಿ. ಆ ಮೂಲಕ ಉತ್ತರ ಕರ್ನಾಟಕ ಜನತೆಯ ವಿಶೇಷ ಪ್ರೀತಿಯನ್ನು ಗಳಿಸುವಂತಾಗಲಿ.

ಕಪ್ಪತ್ತಗುಡ್ಡವನ್ನು ಸೂಕ್ಷ್ಮವಲಯ ವ್ಯಾಪ್ತಿಯೆಂದು ಸದಾ ಸರಕಾರ ಹೇಳಿಕೊಂಡು ಬಂದಿದೆ ಈ ಕುರಿತು ಆ ಪ್ರದೇಶದಲ್ಲಿ ಯಾವುದೇ ಗಣಿಗಾರಿಕೆ ನಡೆಸದಂತೆ ಸ್ಪಷ್ಟ ಆದೇಶ ನೀಡಬೇಕು. ಕೇವಲ ಪ್ರಸ್ತಾವನೆಗಳನ್ನು ಮುಂದೂಡುವುದರಿಂದ ಜನಸಾಮಾನ್ಯರಲ್ಲಿ ಆತಂಕಗಳು, ಸಂಶಯಗಳು ಮೂಡುವುದು ಸಹಜ. ಇದಕ್ಕೆಲ್ಲ ಪೂರ್ಣವಿರಾಮ ನೀಡಬೇಕಿದೆ. ಕಪ್ಪತ್ತಗುಡ್ಡವು ಜೀವ ವೈವಿಧ್ಯ ಹಾಗೂ ಸಸ್ಯವೈವಿಧ್ಯಗಳ ಪ್ರದೇಶವಾಗಿದ್ದು, ಸಾವಿರಾರು ವನಸ್ಪತಿ ಸಸ್ಯಗಳ ಆಗರವಾಗಿರುವ ಈ ಪ್ರದೇಶವು ನಾಡಿನ ಅಮೂಲ್ಯ ಆಸ್ತಿಯಾಗಿದೆ. ಈ ಸಸ್ಯಸಂಪತ್ತು ಹೊಂದಿದ ಕಪ್ಪತ್ತಗುಡ್ಡವನ್ನು ಕಳ್ಳಕಾಕರಿಂದ ದೂರವಿಟ್ಟು ಕಪ್ಪತ್ತಗುಡ್ಡ ಸಂರಕ್ಷಿಸಲು ಮಾನ್ಯ ಮುಖ್ಯಮಂತ್ರಿಗಳು ದಿಟ್ಟ ಕ್ರಮ ಕೈಗೊಳ್ಳಬೇಕೆಂದು ಸಭಾಪತಿ ಬಸವರಾಜ ಹೊರಟ್ಟಿಯವರು ಮುಖ್ಯಮಂತ್ರಿಗಳಿಗೆ ಬರೆದ ಪತ್ರದಲ್ಲಿ ಒತ್ತಾಯಿಸಿದ್ದಾರೆ.

## ಸರಕಾರಕ್ಕೆ ಪತ್ರ ಬರೆದ ಸಭಾಪತಿ ಬಸವರಾಜ ಹೊರಟ್ಟಿ

